# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 513 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) |
| **ಉತ್ತರಿಸಬೇಕಾದ ದಿನಾಂಕ** | : | 20-02-2023 |
| **ಉತ್ತರಿಸುವ ಸಚಿವರು** | : | ಪ್ರವಾಸೋದ್ಯಮ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಒಟ್ಟು ಐತಿಹಾಸಿಕ ಸ್ಥಳಗಳೆಷ್ಟು ; ಐತಿಹಾಸಿಕ ಸ್ಥಳಗಳ ನಿರ್ವಹಣೆಗಾಗಿ ವಾರ್ಷಿಕವಾಗಿ ಸರ್ಕಾರ ನಿಗಧಿಪಡಿಸಿರುವ ಅನುದಾನವೆಷ್ಟು; | ರಾಜ್ಯದಲ್ಲಿ 844 ಘೋಷಿತ ರಾಜ್ಯ ಸಂರಕ್ಷಿತ ಸ್ಮಾರಕಗಳು ಹಾಗೂ 608 ಘೋಷಿತ ರಾಷ್ಟ್ರೀಯ ಸಂರಕ್ಷಿತ ಸ್ಮಾರಕಗಳಿದ್ದು, ಅಂದಾಜು 25000 ಅರಕ್ಷಿತ ಸ್ಮಾರಕಗಳಿರುವ ಸಾಧ್ಯತೆಯಿದ್ದು, ಈ ಕುರಿತಂತೆ ಗ್ರಾಮವಾರು ಸರ್ವೇ ಮೂಲಕ ಪ್ರಾಚ್ಯಾವಶೇಷಗಳ ದಾಖಲೀಕರಣವನ್ನು ಕೈಗೊಳ್ಳಲಾಗುತ್ತಿದೆ. ಕಳೆದ ಎರಡು ವರ್ಷದಲ್ಲಿ ಒಟ್ಟು 19 ತಾಲ್ಲೂಕು ಸರ್ವೇ ಕಾರ್ಯವನ್ನು ಪೂರ್ಣಗೊಳಿಸಿದ್ದು, ಪ್ರಸಕ್ತ ಆರ್ಥಿಕ ಸಾಲಿನಲ್ಲಿ 20 ತಾಲ್ಲೂಕುಗಳ ಸರ್ವೇ ಕಾರ್ಯವು ಪ್ರಗತಿಯಲ್ಲಿರುತ್ತದೆ.<br><br>ರಾಜ್ಯದಲ್ಲಿ 844 ರಕ್ಷಿತ ಸ್ಮಾರಕಗಳು ಮತ್ತು ಸಾಕಷ್ಟು ಅರಕ್ಷಿತ ಸ್ಮಾರಕಗಳಿದ್ದು, ಇವುಗಳ ಸ್ವಚ್ಛತೆ, ಉದ್ಯಾನವನ ನಿರ್ಮಾಣ ಮತ್ತು ನಿರ್ವಹಣೆ ಹಾಗೂ ಬೇಲಿ ಅಳವಡಿಕೆ ಕಾಮಗಾರಿಗಳಿಗೆ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಗೆ ಅನುದಾನದ ಕೊರತೆಯಿರುತ್ತದೆ.<br><br>ಇದನ್ನು ಮನಗಂಡು ಪ್ರವಾಸೋದ್ಯಮ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳು ಹೊರಡಿಸಿರುವ ಜಂಟಿ ಸುತ್ತೋಲೆ ಸಂಖ್ಯೆ: ಟಿಓಆರ್ 209 ಟಿಡಿಪಿ 2020, ದಿನಾಂಕ:06.06.2022ರಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ (MGNREGA) ಯೋಜನೆಯಡಿ ರಾಜ್ಯ/ರಾಷ್ಟ್ರೀಯ ಸಂರಕ್ಷಿತ ಸ್ಮಾರಕಗಳ ಬಳಿ ಸ್ವಚ್ಛತೆ, ಉದ್ಯಾನವನ ಅಭಿವೃದ್ಧಿ ಹಾಗೂ ಬಯೋಫೆನ್ಸಿಂಗ್ ಅಳವಡಿಸುವ ಕಾಮಗಾರಿಯನ್ನು ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿದೆ ಮತ್ತು ಸಂರಕ್ಷಿತ ಪ್ರದೇಶದಲ್ಲಿ ಕಲ್ಯಾಣಿ/ ಪುಷ್ಕರಣಿ/ ಬಾವಿ ಇತ್ಯಾದಿ ರೂಪಗಳಲ್ಲಿ ನೀರು ಸಂಗ್ರಹಣೆ ಮೂಲವಿದ್ದರೆ, ಆ ರಚನೆಯ ಪಾರಂಪರಿಕ ಮೌಲ್ಯಕ್ಕೆ ಧಕ್ಕೆಯಾಗದಂತೆ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಸಲಹೆಯನ್ನು ಅನುಸರಿಸಿ ಅದನ್ನು ಪುನಃಸ್ಥಾಪಿಸಲು ಅವಕಾಶವನ್ನು ಸಹ ಕಲ್ಪಿಸಲಾಗಿರುತ್ತದೆ.<br><br>ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಇವರ ಜಿಲ್ಲೆಯ ವ್ಯಾಪ್ತಿಯಲ್ಲಿನ ಸ್ಮಾರಕಗಳ ಬಳಿ MGNREGA ಯೋಜನೆಯಡಿ ಈ ಕಾರ್ಯಕ್ರಮಗಳನ್ನು ಪ್ರಸಕ್ತ ಆರ್ಥಿಕ ಸಾಲಿನಿಂದ ಅನುಷ್ಠಾನಗೊಳಿಸಲು ಕ್ರಿಯಾಯೋಜನೆಯನ್ನು ರೂಪಿಸಿ, ಅಗತ್ಯ ಕ್ರಮವನ್ನು ಕೈಗೊಳ್ಳಲು ಸೂಕ್ತ ನಿರ್ದೇಶನ ನೀಡಲಾಗಿದೆ. |
| ಆ) | ರಾಜ್ಯದಲ್ಲಿನ ಬಹಳಷ್ಟು ಐತಿಹಾಸಿಕ ಸ್ಥಳಗಳಲ್ಲಿ ಮೂಲ ಸೌಕರ್ಯಗಳ ಕೊರತೆಯಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ; | 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 341ರಲ್ಲಿ, "ರಾಜ್ಯದ ಸ್ಮಾರಕಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ "Adopt A Monument" ಯೋಜನೆ ಮೂಲಕ ದತ್ತು ಪಡೆಯಲು ಅವಕಾಶ ಕಲ್ಪಿಸಲಾಗುವುದು" ಎಂದು ಘೋಷಿಸಲಾಗಿದೆ. ಸರ್ಕಾರ ಆದೇಶ ಸಂಖ್ಯೆ:ಟಿಓಆರ್/31/ಟಿಡಿವಿ/2022, ದಿನಾಂಕ:08.04.2022ರಲ್ಲಿ ಈ ಯೋಜನೆಗೆ ಸರ್ಕಾರದ ತಾತ್ವಿಕ ಅನುಮೋದನೆ ನೀಡಲಾಗಿದೆ. |
| ಇ) | ರಾಜ್ಯದಲ್ಲಿನ ಐತಿಹಾಸಿಕ ಸ್ಥಳಗಳ ನಿರ್ವಹಣೆಯನ್ನು ಖಾಸಗಿ | ಈ ಯೋಜನೆಯ ಅನುಷ್ಠಾನ ಸಂಸ್ಥೆಯಾದ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಮೂಲಕ ಒಟ್ಟಾರೆ 53 ಸ್ಮಾರಕಗಳನ್ನು ದತ್ತು |

| | | |
|---|---|---|
| | ಸಂಸ್ಥೆಗಳಿಗೆ ನೀಡಲಾಗಿದೆಯೇ; ಹಾಗಿದ್ದಲ್ಲಿ, ನೀಡಲಾಗಿರುವ ಐತಿಹಾಸಿಕ ಸ್ಥಳಗಳು ಎಷ್ಟು ? | ನೀಡಲು ಆಯ್ಕೆ ಮಾಡಿ Expression of Interest ಟೆಂಡರ್ ಕರೆಯಲಾಗಿತ್ತು. ಇದರಲ್ಲಿ ಎರಡು ಸ್ಮಾರಕಗಳಾದ 1) ವಿಜಯಪುರ ಜಿಲ್ಲೆ, ವಿಜಯಪುರ ನಗರದಲ್ಲಿರುವ ತಾಜ್ ಬಾವಡಿ ಸ್ಮಾರಕದ ಸಂರಕ್ಷಣೆಗಾಗಿ ವಿಶ್ವ ಪರಂಪರೆ ನಿಧಿ ಸಂಸ್ಥೆ ಮತ್ತು 2) ಕೊಪ್ಪಳ ಜಿಲ್ಲೆ, ಆನೆಗುಂದಿ ತಾಲ್ಲೂಕು, ಆನೆಗುಂದಿಯ ಗಗನ್ ಮಹಲ್ ಸ್ಮಾರಕದ ನಿರ್ವಹಣೆಗಾಗಿ ಡೆಕ್ಕನ್ ಹೆರಿಟೇಜ್ ಫೌಂಡೇಶನ್ ಸಂಸ್ಥೆಗಳು ದತ್ತು ಪಡೆಯಲು ಆಸಕ್ತಿಯನ್ನು ವ್ಯಕ್ತಪಡಿಸಿದ್ದು, ಸದರಿ ಸಂಸ್ಥೆಗಳೊಡನೆ ಒಡಂಬಡಿಕೆಗೆ ಮಾಡಿಕೊಂಡು ಸದರಿ ಸ್ಮಾರಕಗಳ ಸಂರಕ್ಷಣೆಗೆ ಕ್ರಮವಹಿಸಲಾಗುವುದು. |

**TOR 55 TDV 2023**

**(ಆನಂದ್ ಸಿಂಗ್)**
ಪ್ರವಾಸೋದ್ಯಮ,
ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು